**AUGUST 14, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

ಮುಖ್ಯಾಂಶಗಳು

- ಹೆಸರುಕಾಳಿಗೆ ಬೆಂಬಲ ಬೆಲೆ: ಶೀಘ್ರ ಕ್ರಮ ಕೈಗೊಳ್ಳುವಂತೆ, ಕೇಂದ್ರ ಸರ್ಕಾರಕ್ಕೆ ಪತ್ರ– ಮುಖ್ಯಮಂತ್ರಿ ಸಿದ್ದರಾಮಯ್ಯ.

- ರಾಜ್ಯದಲ್ಲಿ ಬರಗಾಲ, ಪ್ರವಾಹ ಪರಿಸ್ಥಿತಿ ನಿಭಾಯಿಸಲು ಹಣದ ಕೊರತೆಯಿಲ್ಲ– ಗೃಹ ಸಚಿವ ಡಾ.ಜಿ.ಪರಮೇಶ್ವರ.

- ರಾಜ್ಯದ ಎಲ್ಲ ಜಲಾಶಯಗಳ ಸುರಕ್ಷತೆ ಖಾತ್ರಿಗೆ, ತಾಂತ್ರಿಕ ಸಮಿತಿ ರಚನೆ–ಜಲ ಸಂಪನ್ಮೂಲ ಖಾತೆ ಸಚಿವ ಡಿ.ಕೆ.ಶಿವಕುಮಾರ್.

- ಚಂದ್ರಯಾನ–3 ಮಿ ’ನ್ ಯಶಸ್ಸಿನ ಸ್ಮರಣಾರ್ಥ, ನಾಳೆ ಪ್ರಪ್ರಥಮ ರಾಷ್ಟ್ರೀಯ ಬಾಹ್ಯಾಕಾಶ ದಿನ ಆಚರಣೆ.

ಈಗ ವಾರ್ತೆಗಳ ವಿವರ

*******

ಹೆಸರುಕಾಳಿಗೆ ಬೆಂಬಲ ಬೆಲೆ ನೀಡುವ ಬಗ್ಗೆ, ಶೀಘ್ರ ಕ್ರಮ ಕೈಗೊಳ್ಳುವಂತೆ, ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕೊಪ್ಪಳದ ಬಸಾಪುರದಲ್ಲಿ, ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊಪ್ಪಳ ಜಿಲ್ಲೆಯ ಬಗ್ಗೆ ತಮಗೆ ವಿಶೇ ’ ಕಾಳಜಿಯಿದ್ದು, ಈ ಭಾಗದ ಅಭಿವೃದ್ಧಿ ಕಾರ್ಯಗಳಿಗೆ ಹಾಗೂ ಜನರಿಗೆ ನ್ಯಾಯ ಒದಗಿಸುವ ಕೆಲಸ ಮಾಡುವುದಾಗಿ, ಮುಖ್ಯಮಂತ್ರಿ ತಿಳಿಸಿದರು.

*******

ವಿಜಯಪುರ ಜಿಲ್ಲೆ, ಆಲಮಟ್ಟಿ ಜಲಾಶಯದ ಅಣೆಕಟ್ಟೆ ಎತ್ತರ ಹೆಚ್ಚಿಸುವುದರಿಂದ, ಹಿನ್ನೀರು ಹೆಚ್ಚಿ, ಬಾಧಿತವಾಗುವ ಪ್ರದೇಶದಲ್ಲಿ ಪುನರ್ ವಸತಿ, ಪುನರ್ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಸಿದ್ಧವಿದ್ದು, ಎತ್ತರ ಹೆಚ್ಚಳಕ್ಕೆ ಅಧಿಸೂಚನೆ ಹೊರಡಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸುವುದಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ವಿಜಯಪುರ ಜಿಲ್ಲೆಯ ಆಲಮಟ್ಟಿ ಅಣೆಕಟ್ಟೆಯಲ್ಲಿ ಬಾಗಿನ ಅರ್ಪಿಸಿ, ಅವರು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಲಮಟ್ಟಿ ಅಣೆಕಟ್ಟೆ ಎತ್ತರ ಹೆಚ್ಚಿಸುವುದರಿಂದ, 14 ಲಕ್ಷದ 68 ಸಾವಿರ ಎಕರೆ ಜಮೀನು ನೀರಾವರಿ ವ್ಯಾಪ್ತಿಗೆ ಒಳಪಡಲಿದೆ. ಪುನರ್ ವಸತಿ ಹಾಗೂ ಪುನರ್ ನಿರ್ಮಾಣಕ್ಕಾಗಿ, ಪ್ರಸ್ತುತ 82 ಸಾವಿರ ಕೋಟಿ ರೂಪಾಯಿ ಅಂದಾಜಿಸಲಾಗಿದೆ ಎಂದು ಅವರು ಹೇಳಿದರು

*******

ರಾಜ್ಯದಲ್ಲಿ ಬರಗಾಲ, ಪ್ರವಾಹ ಪರಿಸ್ಥಿತಿ ನಿಭಾಯಿಸಲು ಹಣದ ಕೊರತೆಯಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದ್ದಾರೆ.

ತುಮಕೂರು ಜಿಲ್ಲೆ ಕೊರಟಗೆರೆ ಮತ್ತು ಮಧುಗಿರಿಯಲ್ಲಿ ಮಳೆಯಿಂದ ಹಾನಿಗೆ ಒಳಗಾದ ಪ್ರದೇಶಗಳಿಗೆ ನಿನ್ನೆ ಭೇಟಿ ನೀಡಿದ ಬಳಿಕ ಮಾತನಾಡಿದ ಅವರು, ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ಸರಿಸುಮಾರು 700 ಕೋಟಿ ರೂಪಾಯಿಗಳಷ್ಟು ಹಣ ಲಭ್ಯವಿದ್ದು, ತುರ್ತು ಪರಿಸ್ಥಿತಿಯಲ್ಲಿ ವಿನಿಯೋಗಿಸಲು ಮುಖ್ಯಮಂತ್ರಿಗಳು ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ ಎಂದರು.

*******

ರಾಜ್ಯದ ಎಲ್ಲ ಜಲಾಶಯಗಳ ಸುರಕ್ಷತೆ ಖಾತ್ರಿಗೆ, ತಾಂತ್ರಿಕ ಸಮಿತಿ ರಚಿಸಲಾಗಿದ್ದು, ಈ ಸಮಿತಿ ಎಲ್ಲಾ ಅಣೆಕಟ್ಟುಗಳ ಪರಿಶೀಲನೆ ನಡೆಸಿ, ಸುರಕ್ಷತೆಗೆ ಸಂಬಂಧಿಸಿದ ವರದಿ ನೀಡಲಿದೆ ಎಂದು ಜಲ ಸಂಪನ್ಮೂಲ ಖಾತೆ ಸಚಿವ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಂತ್ರಿಕ ಸಮಿತಿ ಕಾಲ-ಕಾಲಕ್ಕೆ ನೀಡುವ ಸಲಹೆ-ಸೂಚನೆಗಳನ್ನು ಸರ್ಕಾರ ಅನುಷ್ಠಾನಕ್ಕೆ ತರಲಿದೆ ಎಂದರು.

ತುಂಗಭದ್ರಾ ಅಣೆಕಟ್ಟಿನ ಮುರಿದ ಗೇಟನ್ನು ಇಂಜಿನಿಯರ್‌ಗಳ ಪರಿಶ್ರಮದಿಂದ ದುರಸ್ತಿ ಮಾಡಲಾಗಿದೆ. ಈ ಕಾರ್ಯದಲ್ಲಿ ಪಾಲ್ಗೊಂಡ ಪ್ರತಿಯೊಬ್ಬ ಕಾರ್ಮಿಕರನ್ನು ಸರ್ಕಾರ ಗೌರವಿಸಲಿದೆ ಎಂದರು.

*******

ಕೋಲಾರದ ಎಸ್‌ಎನ್‌ಆರ್ ಜಿಲ್ಲಾಸ್ಪತ್ರೆಯಲ್ಲಿ ಮೂಲಸೌಕರ್ಯ ಕಲ್ಪಿಸಲು 9.9 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಕೋಲಾರದಲ್ಲಿ ನಿನ್ನೆ ವಿವಿಧ ಅಭಿವೃದ್ಧಿ ಕಾಮಗಾರಿಯ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಈಗಾಗಲೇ ಕ್ರಿಟಿಕಲ್ ಕೇರ್ ವಿಭಾಗದ ಕಾಮಗಾರಿ ಪ್ರಗತಿಯಲ್ಲಿದ್ದು, 4 ತಿಂಗಳಲ್ಲಿ ಪೂರ್ಣಗೊಳ್ಳಲಿದೆ ಎಂದರು.

ಒಂದೇ ಕಟ್ಟಡದಲ್ಲಿ ಎಲ್ಲಾ ಪರೀಕ್ಷೆಗಳನ್ನು ನಡೆಸುವ ಪ್ರಯೋಗಾಲಯವನ್ನು 1.1 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿದೆ ಎಂದು ಸಚಿವರು ತಿಳಿಸಿದರು.

*******

ತೈವಾನ್ ಎಲೆಕ್ಟ್ರಾನಿಕ್ಸ್ ಬಿಡಿಭಾಗಗಳ ತಯಾರಿಕಾ ಕಂಪನಿ ಬೆಸ್ಟೆಕ್ ಪವರ್ ಎಲೆಕ್ಟ್ರಾನಿಕ್ಸ್ ರಾಜ್ಯದಲ್ಲಿ 200 ಕೋಟಿ ಬಂಡವಾಳ ಹೂಡಲು ಒಲವು ತೋರಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ನೀಡಿರುವ ಅವರು, ಇದರಿಂದಾಗಿ 5 ಸಾವಿರ ಉದ್ಯೋಗ ಸೃಷ್ಟಿಯಾಗಲಿವೆ. ಕಂಪನಿಯು ಬೆಂಗಳೂರಿನ ಸುತ್ತಮುತ್ತಲಿನ ಪ್ರದೇಶದಲ್ಲಿ ಕಾರ್ಖಾನೆ ಸ್ಥಾಪಿಸಲು ಆಸಕ್ತಿ ತೋರಿದ್ದು, ಇದಕ್ಕೆ ರಾಜ್ಯ ಸರ್ಕಾರವು ಎಲ್ಲಾ ರೀತಿಯ ಸಹಕಾರ ನೀಡಲಿದೆ ಎಂದಿದ್ದಾರೆ.

*******

ಮಣ್ಣಿನ ಆರೋಗ್ಯ ಕಾಪಾಡಲು ಸಾವಯವ ಕೃಷಿ ಉತ್ತಮ ಮಾರ್ಗ ಎಂದು ಕೃಷಿ ಖಾತೆ ಸಚಿವ ಚಲುವರಾಯಸ್ವಾಮಿ ಹೇಳಿದ್ದಾರೆ.

ಸಾವಯವ ಕೃಷಿ ಪದ್ಧತಿ ಅಡಿ, ಬಹು ಬೆಳೆ ಆಶ್ರಯಿಸಿ, ಉತ್ತಮ ಆದಾಯ ಗಳಿಸುತ್ತಿರುವ, ಚಿಕ್ಕಬಳ್ಳಾಪುರ ತಾಲೂಕಿನ ಕೊತ್ತನೂರು ಗ್ರಾಮದ, ಪ್ರಗತಿಪರ ರೈತ ಮಹಿಳೆ ಗೌರಮ್ಮ ಅವರ ಜಮೀನಿಗೆ ನಿನ್ನೆ ಭೇಟಿ ನೀಡಿ, ಸಂವಾದ ನಡೆಸಿದ ಸಚಿವರು ತಾತ್ಕಾಲಿಕ ಇಳುವರಿಗಾಗಿ, ರಾಸಾಯನಿಕ ಗೊಬ್ಬರಗಳನ್ನು ಬಳಸುವುದು, ದೀರ್ಘಕಾಲೀನ ತೊಂದರೆಗಳಿಗೆ ಕಾರಣವಾಗುತ್ತದೆ ಎಂದರು.

ರೈತರು ರಾಸಾಯನಿಕ ರಸಗೊಬ್ಬರಗಳಿಗೆ ಹೊರತಾದ ಸಾವಯವ ಗೊಬ್ಬರಕ್ಕೆ ಆದ್ಯತೆ ನೀಡಬೇಕು ಎಂದು ಸಚಿವರು ಮನವಿ ಮಾಡಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಚಂದ್ರಯಾನ-3 ಮಿ ನ್ ಯಶಸ್ಸಿನ ಸ್ಮರಣಾರ್ಥ, ನಾಳೆ ಪ್ರಪ್ರಥಮ ರಾಷ್ಟ್ರೀಯ ಬಾಹ್ಯಾಕಾಶ ದಿನವನ್ನು, ದೇಶಾದ್ಯಂತ ವಿಶಿಷ್ಟವಾಗಿ ಆಚರಿಸಲಾಗುತ್ತಿದೆ.

ವಿದ್ಯಾರ್ಥಿಗಳಲ್ಲಿ ಬಾಹ್ಯಾಕಾಶ ವಿಜ್ಞಾನದ ಕುರಿತು ಆಸಕ್ತಿ ಮೂಡಿಸಲು, ಗಗನಯಾತ್ರಿ ಹಾಗೂ ಬಾಹ್ಯಾಕಾಶ ವಿಜ್ಞಾನಿಗಳ ಕೊಡುಗೆಗಳ ಬಗ್ಗೆ ತಿಳಿಸುವ ನಿಟ್ಟಿನಲ್ಲಿ, ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ, ಅನೇಕ ವಿಜ್ಞಾನ ಚಟುವಟಿಕೆಗಳನ್ನು ಆಯೋಜಿಸಿದೆ.

ಶಿವಮೊಗ್ಗದ ಡಿ.ವಿ.ಎಸ್. ಸ್ವತಂತ್ರ ಪಿ.ಯು. ವಿಜ್ಞಾನ ಕಾಲೇಜಿನಲ್ಲಿ, ಬೆಳಗ್ಗೆ **10.30**ಕ್ಕೆ ಇಸ್ರೋ ಸಂಸ್ಥೆಯ ವಿಜ್ಞಾನಿಗಳು ಪಾಲ್ಗೊಂಡು, ಮಾರ್ಗದರ್ಶನ ಮಾಡಲಿದ್ದಾರೆ.

ಬೆಂಗಳೂರಿನ ನೆಹರು ತಾರಾಲಯದಲ್ಲಿ ವಿಶೇಷ ಪ್ರದರ್ಶಿನಿ ಹಾಗೂ ಬಾಹ್ಯಾಕಾಶ ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮಗಳನ್ನು, ಆಯೋಜಿಸಲಾಗಿದೆ.

*******

ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ, ಇದೇ **25**, ಬರುವ ಭಾನುವಾರದಂದು, ಬೆಳಗ್ಗೆ **11** ಗಂಟೆಗೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ದೇಶದ ಜನತೆಯೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ.

ಇದು ಮನ್ ಕಿ ಬಾತ್ ಕಾರ್ಯಕ್ರಮದ **113**ನೇ ಆವೃತ್ತಿಯಾಗಿದ್ದು, ಸಾರ್ವಜನಿಕರು ತಮ್ಮ ಅನಿಸಿಕೆ ಹಾಗೂ ಅಭಿಪ್ರಾಯಗಳನ್ನು "ಮೈ ಜಿ.ಒ.ವಿ. ಓಪನ್ ಫೋರ್‌ಂ", "ನಮೋ ಆ್ಯಪ್" ಅಥವಾ ಉಚಿತ ಸಹಾಯವಾಣಿ ಸಂಖ್ಯೆ **1800-11-7800** ಮೂಲಕ, ಹಂಚಿಕೊಳ್ಳಬಹುದು.

*******

ಏ ್ಯಾದ ಅತ್ಯಾಧುನಿಕ ನೌಕಾ ನೆಲೆಗಳಲ್ಲಿ ಒಂದಾದ, ಕಾರವಾರದ ಸೀ ಬರ್ಡ್ ನೌಕಾ ನೆಲೆಯನ್ನು ಇನ್ನ ್ಟ ಅಭಿವೃದ್ಧಿಪಡಿಸುವ ಯೋಚನೆ ಇದೆ ಎಂದು, ಕೇಂದ್ರ ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ತಿಳಿಸಿದ್ದಾರೆ.

ಉತ್ತರಕನ್ನಡ ಜಿಲ್ಲೆ, ಕಾರವಾರದ ನೌಕಾ ನೆಲೆಗೆ ಭೇಟಿ ನೀಡಿ, ದೇಶದ ಕಡಲ ಭದ್ರತೆ ಮತ್ತು ಕಾರ್ಯಾಚರಣೆಯ ಸಿದ್ಧತೆಯ ಪರಿಶೀಲನೆ ನಡೆಸಿ, ಮಾತನಾಡಿದ ಅವರು, 'ಪ್ರೊಜೆಕ್ಟ್ ಸೀಬರ್ಡ್' ಯೋಜನೆ, ಹಿಂದೂ ಮಹಾ ಸಾಗರದಲ್ಲಿ ಭಾರತೀಯ ನೌಕಾಪಡೆಯ ಸಾಮರ್ಥ್ಯ ಹೆಚ್ಚಿಸುವ, ಮಹತ್ವದ ಯೋಜನೆಯಾಗಿದೆ ಎಂದರು.

ಈ ಸಂದರ್ಭದಲ್ಲಿ ವೈಸ್ ಅಡ್ಮಿರಲ್ ತರುಣ್ ಸೋಬ್ತಿ, ರಿಯರ್ ಅಡ್ಮಿರಲ್ ಕೆ.ಎಂ. ರಾಮಕೃ ್ಣನ್ ಇದ್ದರು.

*******

ಅಗ್ನಿಪಥ್ ಯೋಜನೆಯಡಿ, ವಿವಿಧ ಹುದ್ದೆಗಳ ನೇಮಕಾತಿಗಾಗಿ ನಡೆದ ಆನ್‌ಲೈನ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ, ದೈಹಿಕ ಕ್ಷಮತೆ ಹಾಗೂ ವೈದ್ಯಕೀಯ ಪರೀಕ್ಷೆಗಳನ್ನು, ಇಂದಿನಿಂದ 31 ನೇ ತಾರೀಖಿನವರೆಗೆ, ಶಿವಮೊಗ್ಗದ ನೆಹರು ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ ಎಂದು, ಕರ್ನಲ್ ಕೃಷ್ಣನ್ ಕಶ್ಯಪ್ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆನ್‌ಲೈನ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ಶಿವಮೊಗ್ಗ, ದಾವಣಗೆರೆ, ಬಾಗಲಕೋಟೆ, ವಿಜಯಪುರ, ಧಾರವಾಡ, ಉತ್ತರಕನ್ನಡ, ದಕ್ಷಿಣ ಕನ್ನಡ, ಉಡುಪಿ, ಗದಗ, ಹಾವೇರಿ ಮತ್ತು ಚಿಕ್ಕಮಗಳೂರು ಸೇರಿದಂತೆ, ರಾಜ್ಯದ 11 ಜಿಲ್ಲೆಗಳಿಂದ, ನಿತ್ಯ 800 ಅಭ್ಯರ್ಥಿಗಳು ಭಾಗವಹಿಸುವ ನಿರೀಕ್ಷೆ ಇದೆ ಎಂದರು.

*******

ಧಾರವಾಡ ಬ್ಯಾಡ್ಮಿಂಟನ್ ಅಸೋಸಿಯೇಷನ್ ವತಿಯಿಂದ, ಇದೇ 24 ಹಾಗೂ 25 ರಂದು, ಓಪನ್ ಬ್ಯಾಡ್ಮಿಂಟನ್ ಟೂರ್ನಿ ಆಯೋಜಿಸಲಾಗಿದೆ ಎಂದು ಅಸೋಸಿಯೇಷನ್ ಅಧ್ಯಕ್ಷ ಗೋಪಾಲಕೃಷ್ಣ ತಿಳಿಸಿದ್ದಾರೆ.

ಧಾರವಾಡದ ಆರ್.ಎನ್.ಶೆಟ್ಟಿ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯಾವಳಿಗೆ ಶನಿವಾರ 24 ರಂದು ಬೆಳಗ್ಗೆ ಜಿಲ್ಲಾಧಿಕಾರಿ ದಿವ್ಯಪ್ರಭು ಚಾಲನೆ ನೀಡಲಿದ್ದಾರೆ.

*******

ಮೈಸೂರು ಜಿಲ್ಲೆ, ಹುಣಸೂರು ಸಮೀಪದ, ನಾಗರಹೊಳೆಯ ವೀರನಹೊಸಹಳ್ಳಿ ಗೇಟ್ ಬಳಿ, ಅಭಿಮನ್ಯು ನೇತೃತ್ವದ 9 ಆನೆಗಳಿಗೆ, ಮೈಸೂರು ಅರಮನೆ ಪುರೋಹಿತರು, ತುಲಾ ಲಗ್ನದಲ್ಲಿ ನಿನ್ನೆ ಪೂಜೆ ಸಲ್ಲಿಸಿದರು.

ಮೊದಲ ಹಂತದಲ್ಲಿ ಒಟ್ಟು 9 ಆನೆಗಳು ಮೈಸೂರಿಗೆ ಪ್ರಯಾಣ ಬೆಳೆಸಿದ್ದು, ವಿಶ್ವ ವಿಖ್ಯಾತ 414 ನೇ ಮೈಸೂರು ದಸರಾ ಜಂಬೂ ಸವಾರಿ ಮೆರವಣಿಗೆಯಲ್ಲಿ ಪಾಲ್ಗೊಳ್ಳಲಿವೆ.

*******

ಹೆಸರಾಂತ ಸಂಗೀತ ಸಂಘಟಕರಾಗಿದ್ದ, ಅನಂತ ಹರಿಹರ ಅವರ ನೆನಪಿನಲ್ಲಿ ಧಾರವಾಡದ ಜಿ.ಬಿ. ಜೋಶಿ ಮೆಮೋರಿಯಲ್ ಟ್ರಸ್ಟ್ ಹಾಗೂ ಹುಬ್ಬಳ್ಳಿಯ ಕ್ಷಮತಾ ಸಂಸ್ಥೆ ಸಂಯುಕ್ತ ಆಶ್ರಯದಲ್ಲಿ, ನಾಳೆ 23 ರಿಂದ ಮೂರು ದಿನಗಳ, 'ಅನಂತ ಸ್ವರ ನಮನ' ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿದೆ.

ನಾಳೆ ಸಂಜೆ 5 ಗಂಟೆಗೆ, ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಭವನದಲ್ಲಿ, ಅನಂತ ಸ್ವರ ನಮನ ಕಾರ್ಯಕ್ರಮ ಉದ್ಘಾಟನೆಗೊಳ್ಳಲಿದ್ದು, ನಂತರ ಸುಜಯೀಂದ್ರ ಕುಲಕರ್ಣಿ, ಶುಭಾಂಗಿ ಜಾಧವ, ವಿಜಯಕುಮಾರ ಪಾಟೀಲ ಅವರಿಂದ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ ನಡೆಯಲಿದೆ.

*******

ಪ್ರಧಾನಮಂತ್ರಿ ಸ್ವ ನಿಧಿ ಸೇ ಸಮೃದ್ಧಿ ತಕ್, ಕೇಂದ್ರ ಪುರಸ್ಕೃತ ಯೋಜನೆ ಅನು ಾನದಲ್ಲಿ, ಉತ್ತಮ ಪ್ರಗತಿ ಸಾಧಿಸಿದ್ದಕ್ಕಾಗಿ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಗೆ 'ಸ್ವನಿಧಿ ಸೇ ಸಮೃದ್ಧಿ ಪ್ರಶಸ್ತಿ' ರಾಷ್ಟ್ರೀಯ ಪ್ರಶಸ್ತಿ ಲಭಿಸಿದೆ ಎಂದು, ಆಯುಕ್ತ ಈಶ್ವರ್ ಉಳ್ಳಾಗಡ್ಡಿ ತಿಳಿಸಿದ್ದಾರೆ.

22 ಸಾವಿರದ 223 ಬೀದಿ ಬದಿ ವ್ಯಾಪಾರಿಗಳಿಗೆ, ಸಕಾಲಿಕವಾಗಿ ಸಾಲ ಮಂಜೂರು ಮಾಡಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಹೆಸರುಕಾಳಿಗೆ ಬೆಂಬಲ ಬೆಲೆ: ಶೀಘ್ರ ಕ್ರಮ ಕೈಗೊಳ್ಳುವಂತೆ, ಕೇಂದ್ರ ಸರ್ಕಾರಕ್ಕೆ ಪತ್ರ- ಮುಖ್ಯಮಂತ್ರಿ ಸಿದ್ದರಾಮಯ್ಯ.

ರಾಜ್ಯದಲ್ಲಿ ಬರಗಾಲ, ಪ್ರವಾಹ ಪರಿಸ್ಥಿತಿ ನಿಭಾಯಿಸಲು ಹಣದ ಕೊರತೆಯಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ.

ರಾಜ್ಯದ ಎಲ್ಲ ಜಲಾಶಯಗಳ ಸುರಕ್ಷತೆ ಖಾತ್ರಿಗೆ, ತಾಂತ್ರಿಕ ಸಮಿತಿ ರಚನೆ-ಜಲ ಸಂಪನ್ಮೂಲ ಖಾತೆ ಸಚಿವ ಡಿ.ಕೆ.ಶಿವಕುಮಾರ್.

ಚಂದ್ರಯಾನ-3 ಮಿ ’ನ್ ಯಶಸ್ಸಿನ ಸ್ಮರಣಾರ್ಥ, ನಾಳೆ ಪ್ರಪ್ರಥಮ ರಾಷ್ಟ್ರೀಯ ಬಾಹ್ಯಾಕಾಶ ದಿನ ಆಚರಣೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

******